# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿ ಕೃಷಿ ಸಹಕಾರ ಸಂಘಗಳಿಂದ / ಬ್ಯಾಂಕುಗಳಿಂದ ರೈತರು ಪಡೆದ ಅಲ್ಪಾವಧಿ ಬೆಳೆ ಸಾಲ ಮನ್ನಾ-2012.

* * *

**ಪ್ರಸ್ತಾವನೆ:**

2011-12ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಅಕ್ಟೋಬರ್‌ವರೆಗೆ ಮಳೆಯ ಅಭಾವದಿಂದ ಹಾಗೂ ಒಣಹವೆಯಿಂದ ಬಾಧಿತವಾದ 21 ಜಿಲ್ಲೆಗಳ 70 ತಾಲ್ಲೂಕುಗಳನ್ನು ದಿನಾಂಕ:04.10.2011ರ ಸರ್ಕಾರಿ ಆದೇಶದಲ್ಲಿ ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿದೆ. ಮುಂದುವರೆದು, 09 ಜಿಲ್ಲೆಗಳ 14 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ದಿನಾಂಕ:07.10.2011ರ ಆದೇಶದಡಿ ಘೋಷಿಸಲಾಗಿದೆ. ಅಲ್ಲದೇ, ದಿನಾಂಕ:15.10.2011ರ ಆದೇಶದಲ್ಲಿ 06 ಜಿಲ್ಲೆಗಳ 06 ತಾಲ್ಲೂಕುಗಳನ್ನು ಮತ್ತು 08.11.2011ರಲ್ಲಿ 07 ಜಿಲ್ಲೆಗಳ 09 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿದೆ. ತದನಂತರ, ದಿನಾಂಕ: 01.02.2012ರಂದು 10 ಜಿಲ್ಲೆಗಳ 24 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿದೆ. 2012-13ರಲ್ಲಿಯೂ ಮಳೆ ಪ್ರಮಾಣ ಕುಂಠಿತವಾಗಿ ಒಣಹವೆ ಮುಂದುವರೆದ ಕಾರಣ ಸರ್ಕಾರ ದಿನಾಂಕ: 26.07.2012ರಂದು ಈ ಹಿಂದೆ 2011-12ನೇ ಸಾಲಿಗೆ ಬರಪೀಡಿತ ಪ್ರದೇಶವೆಂದು ಘೋಷಿಸಿದ 24 ಜಿಲ್ಲೆಗಳ 123 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಮುಂದುವರೆಸಿ ಹೆಚ್ಚುವರಿಯಾಗಿ 10 ಜಿಲ್ಲೆಗಳ 19 ತಾಲ್ಲೂಕುಗಳನ್ನು 2012-13ನೇ ಸಾಲಿಗೆ ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿದೆ.

ಕರ್ನಾಟಕ ರಾಜ್ಯ ಅನುಭವಿಸುತ್ತಿರುವ ಬರಗಾಲ ಪರಿಸ್ಥಿತಿ ಕಳೆದ 40 ವರ್ಷಗಳಲ್ಲಿಯೇ ತೀವ್ರವಾಗಿದೆಯೆಂದು ಮತ್ತು ರೈತರು ಬಿತ್ತನೆ ಮಾಡಿರುವ ಪ್ರದೇಶಗಳಲ್ಲಿ ಸತತ ಒಣಹವೆ ಹಾಗೂ ಮಳೆಯ ಅಭಾವದಿಂದ ಬೆಳೆನಾಶವಾಗಿರುವುದನ್ನು ಸರ್ಕಾರ ಮನಗಂಡಿದೆ. ಇಂತಹ ಸಂಕಷ್ಟದಲ್ಲಿ ಸಣ್ಣ ಮತ್ತು ಅತೀ ಸಣ್ಣ ರೈತರ ಬೆಳೆ ಸಾಲಗಳನ್ನು ಮನ್ನಾ ಮಾಡಬೇಕೆನ್ನುವ ಬೇಡಿಕೆಯನ್ನು ಸರ್ಕಾರ ಪರಿಶೀಲಿಸಿ ಈ ರೈತರ ಜೊತೆಗೆ ಇತರೇ ರೈತರಿಗೂ ಸ್ವಲ್ಪ ಪ್ರಮಾಣದಲ್ಲಿ ಸಾಲ ಮನ್ನಾ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಸದರಿ ಪ್ರಸ್ತಾವೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 272 ಸಿಎಲ್‌ಎಸ್ 2012, ಬೆಂಗಳೂರು, ದಿನಾಂಕ: 23.08.2012**

ರಾಜ್ಯದ ರೈತರು ಕೃಷಿ ಸಹಕಾರ ಸಂಘಗಳಿಂದ ದಿನಾಂಕ:01.08.2011 ರಿಂದ 25.07.2012 ರವರೆಗೆ ಪಡೆದು ದಿನಾಂಕ:25.07.2012ಕ್ಕೆ ಬಾಕಿ ಇರುವ ಬೆಳೆ ಸಾಲವನ್ನು ರೂ.25,000.00ವರೆಗೆ ಅಸಲು ಮತ್ತು ಅದಕ್ಕೆ ಸಂಬಂಧಪಟ್ಟ ಬಡ್ಡಿಯೊಂದಿಗೆ ಸಂಪೂರ್ಣ ಮನ್ನಾ ಮಾಡಲಾಗಿದೆ.

ಹೀಗೆ ಮನ್ನಾ ಮಾಡಿದ ಮೊತ್ತವನ್ನು ಸಹಕಾರ ಸಂಘಗಳಿಗೆ ಭರಿಸಿ ಕೊಡಲು ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಲಾಗಿದೆ.

→



**ಷರತ್ತುಗಳು :**

1. ಈ ಸೌಲಭ್ಯವು ಕೃಷಿ ಪತ್ತಿನ ಸಹಕಾರ ಸಂಘಗಳಿಂದ ದಿನಾಂಕ:01.08.2011 ರಿಂದ 25.07.2012ರವರೆಗೆ ಬೆಳೆ ಸಾಲ ಪಡೆದು ದಿನಾಂಕ:25.07.2012ಕ್ಕೆ ಬಾಕಿ ಇರುವ ಸಾಲಕ್ಕೆ ಅನ್ವಯವಾಗುತ್ತದೆ.
2. ದಿನಾಂಕ:01.08.2011 ರಿಂದ 25.07.2012ರವರೆಗೆ ಸಾಲ ಪಡೆದು ದಿನಾಂಕ:25.07.2012ಕ್ಕೆ ಬಾಕಿ ಇರುವ ರೂ.25,000.00 ಒಳಗೆ ಇರುವ ಬೆಳೆ ಸಾಲವನ್ನು ಬಡ್ಡಿ ಸಮೇತ ಪೂರ್ಣ ಮನ್ನಾ ಮಾಡಲಾಗಿದೆ.
3. ರೂ.25,000.00ಕ್ಕಿಂತ ಹೆಚ್ಚಿಗೆ ಸಾಲ ಪಡೆದು ಬಾಕಿ ಇರುವ ಸಾಲದಲ್ಲಿ ಮೊದಲ ರೂ.25,000.00 ಅಸಲು ಮತ್ತು ಅದಕ್ಕೆ ಅನ್ವಯವಾಗುವ ಬಡ್ಡಿಯನ್ನು, ಸಾಲ ಪಡೆದ ರೈತರು ರೂ.25,000.00 ಮೇಲ್ಪಟ್ಟ ಸಾಲದ ಅಸಲು ಮತ್ತು ಅದಕ್ಕೆ ಅನ್ವಯವಾಗುವ ದರದಲ್ಲಿ ಬಡ್ಡಿಯನ್ನು ಗಡುವು ದಿನಾಂಕ ಅಥವಾ ದಿನಾಂಕ:30.06.2013 ಇದರಲ್ಲಿ ಯಾವುದು ಮೊದಲೋ ಆ ದಿನಾಂಕದೊಳಗಾಗಿ ಮರುಪಾವತಿ ಮಾಡಿದಲ್ಲಿ, ಮನ್ನಾ ಮಾಡಲಾಗುವುದು.
4. ಈ ಯೋಜನೆಯಲ್ಲಿ ಅರ್ಹವಿರುವ ಸಾಲವು ರೂ.25,000.00 ಮಿತಿಯೊಳಗಿದ್ದರೆ ಆ ಸಾಲದ ಅಸಲು ಮತ್ತು ಸಂಬಂಧಿಸಿದ ಬಡ್ಡಿಯೊಂದಿಗೆ ಕ್ಲೈಮು ಬಿಲ್ಲುಗಳನ್ನು ಕಾಲಕಾಲಕ್ಕೆ ಸಲ್ಲಿಸಿ ಮರುಪಾವತಿ ಪಡೆಯುವುದು.
5. ಈ ಯೋಜನೆಯಲ್ಲಿ ಅರ್ಹವಿರುವ ಸಾಲವು ರೂ.25,000.00ಕ್ಕೆ ಮೇಲ್ಪಟ್ಟಿದ್ದಲ್ಲಿ, ಸಾಲದ ಮೊದಲ ರೂ.25,000.00ಗಳ ಅಸಲು ಮತ್ತು ಅದಕ್ಕೆ ಸಂಬಂಧಿಸಿದ ಬಡ್ಡಿಯನ್ನು, ರೈತರು ರೂ.25,000.00 ಮೇಲ್ಪಟ್ಟ ಸಾಲದ ಅಸಲು ಮತ್ತು ಅದಕ್ಕೆ ಅನ್ವಯವಾಗುವ ದರದಲ್ಲಿ ಬಡ್ಡಿಯನ್ನು ಗಡುವು ದಿನಾಂಕ ಅಥವಾ ದಿನಾಂಕ:30.06.2013 ಇದರಲ್ಲಿ ಯಾವುದು ಮೊದಲೋ ಆ ದಿನಾಂಕದೊಳಗಾಗಿ ಮರುಪಾವತಿ ಮಾಡಿದಲ್ಲಿ, ಕ್ಲೈಮು ಬಿಲ್ಲುಗಳನ್ನು ಕಾಲಕಾಲಕ್ಕೆ ಸಲ್ಲಿಸಿ ಮರುಪಾವತಿ ಪಡೆಯುವುದು.
6. ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಿಗೆ ಸಂಯೋಜಿಸಲ್ಪಟ್ಟ ಕೃಷಿ ಪತ್ತಿನ ಸಹಕಾರ ಸಂಘಗಳು ಈ ಯೋಜನೆಗೆ ಸಂಬಂಧಿಸಿದ ಕ್ಲೈಮು ಬಿಲ್ಲುಗಳನ್ನು ತಯಾರಿಸಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕು ಮತ್ತು ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕಿನ ಮುಖಾಂತರ ಸಹಕಾರ ಸಂಘಗಳ ನಿಬಂಧಕರಿಗೆ ಕ್ಲೈಮು ಸಲ್ಲಿಸಿ ಮರುಪಾವತಿ ಪಡೆಯುವುದು.
7. ವಾಣಿಜ್ಯ ಬ್ಯಾಂಕುಗಳಿಗೆ ಸಂಯೋಜಿಸಲ್ಪಟ್ಟ ಕೃಷಿ ಪತ್ತಿನ ಸಹಕಾರ ಸಂಘಗಳು ಈ ಯೋಜನೆಗೆ ಸಂಬಂಧಿಸಿದ ಕ್ಲೈಮು ಬಿಲ್ಲುಗಳನ್ನು ತಯಾರಿಸಿ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರ ಮುಖಾಂತರ ಸಹಕಾರ ಸಂಘಗಳ ನಿಬಂಧಕರಿಗೆ ಕ್ಲೈಮು ಸಲ್ಲಿಸಿ ಮರುಪಾವತಿ ಪಡೆಯುವುದು.
8. ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕು(ಪಿಕಾರ್ಡ್)ಗಳು ಈ ಯೋಜನೆಗೆ ಸಂಬಂಧಿಸಿದ ಕ್ಲೈಮು ಬಿಲ್ಲುಗಳನ್ನು ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕಿನ(ಕಸ್ಕಾರ್ಡ್) ಮುಖಾಂತರ ಸಹಕಾರ ಸಂಘಗಳ ನಿಬಂಧಕರಿಗೆ ಸಲ್ಲಿಸಿ ಮರುಪಾವತಿ ಪಡೆಯುವುದು.

→



9. ಈ ಸಾಲ ಮನ್ನಾ ಯೋಜನೆಗೆ ಸಂಬಂಧಿಸಿದಂತೆ ಸಹಕಾರ ಸಂಘಗಳ ನಿಬಂಧಕರು ಆಡಳಿತಾತ್ಮಕ ಮಾರ್ಗಸೂಚಿಗಳನ್ನು ಹೊರಡಿಸಿ ಈ ಯೋಜನೆ ಪರಿಣಾಮಕಾರಿಯಾಗಿ ಜಾರಿಯಾಗುವಂತೆ ನೋಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 234 ವೆಚ್ಚ-2/2012 ರಲ್ಲಿ ದಿನಾಂಕ: 22.08.2012 ರಂದು ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜೆ.ಎಸ್. ರಮಣರೆಡ್ಡಿ)
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

**ಪ್ರತಿಗಳು :**

1. ಮಹಾಲೇಖಪಾಲರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು
5. ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
9. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು-04.
10. ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು.
11. ಎಲ್ಲಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು.
12. ಎಲ್ಲಾ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರು.
13. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಉತ್ತುಂಗ, ನಂ.1, ಪಂಪಾಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು-18.
14. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಚಾಮರಾಜಪೇಟೆ, ಬೆಂಗಳೂರು-18.
15. ಆಂತರಿಕ ಆರ್ಥಿಕ ಸಲಹೆಗಾರರು, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
17. ರಾಜ್ಯ ಖಜಾನೆ ಅಧಿಕಾರಿ, ಜೆ.ಸಿ. ರಸ್ತೆ, ಬೆಂಗಳೂರು.
18. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿ.

:ಆಶಾ/23812